ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :	689
ಸದಸ್ಯರ ಹೆಸರು :	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ:	23-07-2019
ಉತ್ತರಿಸುವ ಸಚಿವರು:	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಹುಕ್ಕೇರಿ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಘಟಕವನ್ನು ಯಾವಾಗ ಆರಂಭಿಸಲಾಗಿದೆ;	ಹುಕ್ಕೇರಿ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಘಟಕವನ್ನು ದಿನಾಂಕ:07-12-2018 ರಂದು ಆರಂಭಿಸಲಾಗಿದೆ.
ಆ)	ಈ ಡಯಾಲಿಸಿಸ್ ಘಟಕದ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ.	ಈ ಡಯಾಲಿಸಿಸ್ ಘಟಕದ ನಿರ್ವಹಣೆಯನ್ನು ಮೆ॥ ಬಿ.ಆರ್.ಎಸ್ ಹೆಲ್ತ್ ಮತ್ತು ರಿಸರ್ಚ್ ಇನ್‌ಸ್ಟಿಟ್ಯೂಟ್, ಬೆಂಗಳೂರು- ಏಜೆನ್ಸಿಗೆ ವಹಿಸಲಾಗಿದೆ.
ಇ)	ವಿದ್ಯುತ್ ಹಾಗೂ ನೀರಿನ ಸರಬರಾಜಿನ ಕೊರತೆಯಿಂದ ಈ ಯಂತ್ರವು ಸ್ಥಗಿತಗೊಂಡಿದ್ದು, ಇದರಿಂದ ಸಾರ್ವಜನಿಕರು ತೊಂದರೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ಸದರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸ ಬೇಕಾಗಿದ್ದ ಸಂದರ್ಭದಲ್ಲಿ ಸಿವಿಲ್ ಕಾಮಗಾರಿಗಳು 2018-19ರಲ್ಲಿ ಚಾಲ್ತಿಯಲ್ಲಿದ್ದು, ತಾತ್ಕಾಲಿಕವಾಗಿ ವಿದ್ಯುತ್ ಪೂರೈಕೆ ಅಡಚಣೆ ಉಂಟಾಗಿರುತ್ತದೆ. ದಿನಾಂಕ: 17-07-2019 ರಂದು ಸಂಭವಿಸಿದ ಮಳೆ ಹಾಗೂ ಬಿರುಗಾಳಿಯಿಂದ ವಿದ್ಯುತ್ ಪೂರೈಕೆಗೆ ಅಡಚಣೆ ಉಂಟಾಗಿದ್ದು, ತ್ವರಿತವಾಗಿ ವಿದ್ಯುತ್ ಪೂರೈಕೆಯನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ.
ಈ)	ನಿರಂತರ ನೀರು ಹಾಗೂ ವಿದ್ಯುತ್ತಿನ ಸರಬರಾಜು ಮಾಡುವ ನಿಟ್ಟಿನಲ್ಲಿ ಹಾಗೂ ನಿರ್ವಾಹಕರ ನಿಷ್ಕಾಳಜಿಯ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?	ನೀರಿನ ಅಭಾವ ವಿದ್ದಲ್ಲಿ, ನಿರಂತರ ನೀರು ಸರಬರಾಜು ಮಾಡಲು ಆಸ್ಪತ್ರೆಯ ಆರೋಗ್ಯ ರಕ್ಷಾ ಸಮಿತಿಯ ಅನುದಾನ ಬಳಕೆಗೆ ಆದೇಶ ಹೊರಡಿಸಲಾಗಿದೆ. ನಿರಂತರ ವಿದ್ಯುತ್ ಲಭ್ಯತೆಗಾಗಿ 30 ಕೆ.ವಿ.ಎ ಜನರೇಟರ್ ಒದಗಿಸಲು ಸರಬರಾಜು ಆದೇಶ ನೀಡಲಾಗಿದೆ. ಸರ್ಕಾರದ ವತಿಯಿಂದ ಡಯಾಲಿಸಿಸ್ ಕೇಂದ್ರವನ್ನು ಸ್ಥಾಪಿಸಲು ಅವಶ್ಯವಿರುವ ಸ್ಥಳ, ವಿದ್ಯುತ್ ಹಾಗೂ ನೀರಿನ ಪೂರೈಕೆಯನ್ನು ಒದಗಿಸಲಾಗಿದೆ.

ಕಡತ ಸಂಖ್ಯೆ: ಆಕುಕ 39 ಎಫ್‌ಪಿಇ 2019

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು